**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಹಣಮಂತ ರುದ್ರಪ್ಪ ನಿರಾಣಿ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಸರ್ಕಾರದ ಉತ್ತರ**

**ವಿಷಯ:-**

ಉತ್ತರ ಕರ್ನಾಟಕದ ಭಾಗಕ್ಕೆ ಮೊದಲಿನಿಂದಲೂ ಮಲತಾಯಿ ಧೋರಣೆ ಆಗುತ್ತಿರುವುದು ಎಲ್ಲರಿಗೂ ತಿಳಿದಿರುವ ವಿಚಾರವಾಗಿದೆ, ಇದನ್ನು ಹೋಗಲಾಡಿಸುವ ದೃಷ್ಟಿಯಿಂದ ವಿಜಯಪುರದಲ್ಲಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವ (Public-Private Partnership - PPP) ಮಾದರಿಯಲ್ಲಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಸರ್ಕಾರದ ನಿರ್ಧಾರವನ್ನು ಕೈಬಿಟ್ಟು ಸಂಪೂರ್ಣ ಸರಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸುವಂತೆ ಒತ್ತಾಯ ಮಾಡಿ ಸುಮಾರು ಒಂದೆರಡು ತಿಂಗಳುಗಳಿಂದ ಪ್ರತಿಭಟನೆ ನಡೆಸುತ್ತಿರುವುದನ್ನು ಸರ್ಕಾರದ ಗಮನಕ್ಕೆ ತರಬಯಸುತ್ತೇನೆ.

ಈಗಾಗಲೇ ಸುಸಜ್ಜಿತವಾದ ಜಿಲ್ಲಾ ಆಸ್ಪತ್ರೆ ಮತ್ತು ಸುಮಾರು 153 ಎಕರೆ ಸರ್ಕಾರಿ ಜಮೀನು ಇರುವುದರಿಂದ ಇದನ್ನು ಖಾಸಗಿಯವರಿಗೆ ಕೊಡುವುದು ಸರಿಯಲ್ಲ, ಪಿಪಿಪಿ ಮಾದರಿಯಾದರೆ ವೈದ್ಯಕೀಯ ಸೀಟುಗಳ ಶುಲ್ಕ ಹೆಚ್ಚಾಗುವುದರಿಂದ ಬಡ ಮತ್ತು ಗ್ರಾಮೀಣ ಮಧ್ಯಮ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣ ಸಿಗುವುದು ಕಷ್ಟವಾಗುತ್ತದೆ ಹಾಗೂ ಸರ್ಕಾರಿ ಆಸ್ಪತ್ರೆಯನ್ನು ಖಾಸಗಿಯವರು ನಿರ್ವಹಿಸಿದರೆ ಪ್ರಸ್ತುತ ಬಡವರಿಗೆ ಸಿಗುತ್ತಿರುವ ಉಚಿತ ಅಥವಾ ಕಡಿಮೆ ವೆಚ್ಚದ ಚಿಕಿತ್ಸೆ ಸಂಪೂರ್ಣ ಸ್ಥಗಿತಗೊಳ್ಳುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕಿದೆ. ವಿಜಯಪುರ ಜಿಲ್ಲಾ ಆಸ್ಪತ್ರೆಯಲ್ಲಿ ಈಗಾಗಲೇ ಅಗತ್ಯವಿರುವಷ್ಟು ಹಾಸಿಗೆಗಳು, ಉಪಕರಣಗಳು ಮತ್ತು ಸರ್ಕಾರಿ ಜಾಗವಿದೆ. ಆದ್ದರಿಂದ ಸರ್ಕಾರವೇ ನೇರವಾಗಿ ಕಾಲೇಜು ನಡೆಸಿದರೆ ಉತ್ತಮವಾಗಲಿದೆ.

ಬಾಗಲಕೋಟೆ ಜಿಲ್ಲೆಗೂ ಸರ್ಕಾರಿ ಮೆಡಿಕಲ್ ಕಾಲೇಜು ಸ್ಥಾಪನೆಯಾಗದೇ ಆ ಭಾಗದ ಜನರು ಉತ್ತಮ ಚಿಕಿತ್ಸೆಗಾಗಿ ಪರದಾಡಿ ಬಡ ಮತ್ತು ಗ್ರಾಮೀಣ ಬಾಗದ ಜನರು ಹೆಚ್ಚಿನ ಚಿಕಿತ್ಸೆಗಾಗಿ ಹೊರ ರಾಜ್ಯಗಳಿಗೆ ಅಥವಾ ದೂರದ ಜಿಲ್ಲೆಗಳಿಗೆ ಹೋಗಬೇಕಾಗಿದೆ ಮತ್ತು ಸೂಕ್ತ ಸಮಯದಲ್ಲಿ ತುರ್ತು ಚಿಕಿತ್ಸೆ ದೊರಕದೆ ಅನೇಕ ಸಾವುಗಳೂ ಸಹ ನಮ್ಮ ಭಾಗದಲ್ಲಿ ಸಂಬವಿಸುತ್ತಿವೆ. ಆದ್ದರಿಂದ ಸರ್ಕಾರವು ಕಲಬುರಗಿ ಜಿಲ್ಲೆಯಲ್ಲಿರುವ ಗುಲ್ಬರ್ಗಾ ಇನ್ಸಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್ ಮಾದರಿಯಲ್ಲಿ ವಿಜಯಪುರ ಅಥವಾ ಬಾಗಲಕೋಟೆಯಲ್ಲಿ ಏಮ್ಸ್ ರೀತಿಯ ಬೃಹತ್ ಆಸ್ಪತ್ರೆ ಸ್ಥಾಪನೆ ಮಾಡುವಂತೆ ಮತ್ತು ಅಂತಹ ಆಧುನಿಕ ಆಸ್ಪತ್ರೆ ನಿರ್ಮಾಣವಾದಲ್ಲಿ ನಮ್ಮ ಭಾಗದ ಜನರಿಗೆ ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಸಹಕಾರಿಯಾಗುತ್ತದೆ. ಈ ನಿಟ್ಟಿನಲ್ಲಿ ಸರ್ಕಾರವು ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಒಂದು ಉತ್ತಮ ಸರ್ಕಾರಿ ಆಸ್ಪತ್ರೆ ಸ್ಥಾಪಿಸುವಂತೆ ಆ ಭಾಗದವರ ಅನೇಕ ವರ್ಷಗಳ ಕೂಗಾಗಿದೆ.

ಆದ್ದರಿಂದ ಸರ್ಕಾರವು ಈ ಕೂಡಲೇ ಸರ್ಕಾರಿ ಏಮ್ಸ್ ರೀತಿಯ ಬೃಹತ್ ಆಸ್ಪತ್ರೆ ನಿರ್ಮಾಣ ಮಾಡುವಂತೆ ಕ್ರಮ ಕೈಗೊಳ್ಳಬೇಕೆಂದು ಸದನದ ಶೂನ್ಯ ವೇಳೆಯಲ್ಲಿ ಸರ್ಕಾರವನ್ನು ಒತ್ತಾಯಿಸುತ್ತೇನೆ.

**ಉತ್ತರ :-**

ರಾಜ್ಯದಲ್ಲಿ ಪ್ರಸ್ತುತ ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಬಳ್ಳಾರಿ, ಬೀದರ್, ರಾಯಚೂರು, ಬೆಳಗಾವಿ, ಶಿವಮೊಗ್ಗ, ಹಾಸನ, ಮಂಡ್ಯ, ಚಾಮರಾಜನಗರ, ಕೊಡಗು, ಕಲಬುರಗಿ, ಕೊಪ್ಪಳ, ಗದಗ, ಕಾರವಾರ, ಚಿಕ್ಕಬಳ್ಳಾಪುರ, ಹಾವೇರಿ, ಯಾದಗಿರಿ, ಚಿಕ್ಕಮಗಳೂರು ಚಿತ್ರದುರ್ಗ, ಜಿಲ್ಲೆಗಳಲ್ಲಿ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.

ರಾಮನಗರ, ಕನಕಪುರ ಮತ್ತು ಬಾಗಲಕೋಟೆಯಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುದಾನದಿಂದ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ರಾಜ್ಯದ ಪ್ರತಿ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಬೇಕೆಂಬುದು ಸರ್ಕಾರದ ನೀತಿಯಾಗಿರುತ್ತದೆ.

ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00ಕೋಟಿಗಳ ಅನಾವರ್ತಕ ವೆಚ್ಚ ಹಾಗೂ 60.00ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ. ಅದರಂತೆ, ಅನುದಾನದ ಲಭ್ಯತೆಯನ್ನು ಆಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಹೊಂದಿರದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುವುದು.

ವೈದ್ಯಕೀಯ ಕಾಲೇಜುಗಳು ಇಲ್ಲದ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರದಿಂದ ಪೂರ್ವಭಾವಿ ಸಭೆ ನಡೆಸಲಾಗಿದ್ದು, iDECK ಸಂಸ್ಥೆಯನ್ನು Transaction Advisor ಆಗಿ ನೇಮಿಸಲಾಗಿದೆ.

ಏಮ್ಸ್ ಸಂಸ್ಥೆಯನ್ನು ರಾಜ್ಯದ ಕಲ್ಯಾಣ ಕರ್ನಾಟಕ ಭಾಗವಾದ ರಾಯಚೂರಿನಲ್ಲಿ ಸ್ಥಾಪಿಸುವಂತೆ ಕೇಂದ್ರ ಸರ್ಕಾರಕ್ಕೆ ಪತ್ರವನ್ನು ಬರೆಯಲಾಗಿದೆ. ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸುವ ಕ್ರಮವು ಕೇಂದ್ರ ಸರ್ಕಾರದ್ದಾಗಿದೆ.

ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಈಗಾಗಲೇ ಸರ್ಕಾರದ ಆದೇಶ ಸಂಖ್ಯೆ ಎಂಇಡಿ 295 ಎಂಎಂಸಿ 2025(ಭಾಗ-4), ದಿನಾಂಕ:06/10/2025ರಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುದಾನದಿಂದ 150 ಎಂಬಿಬಿಎಸ್ ಪ್ರವೇಶ ಮಿತಿಯೊಂದಿಗೆ ಬಾಗಲಕೋಟೆಯಲ್ಲಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ವಿಜಯಪುರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸುವಂತೆ ಧರಣಿಗಳು ನಡೆಯುತ್ತಿದ್ದು, ಕಾಲೇಜು ಪ್ರಾರಂಭದ ಕುರಿತು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಮಾನ್ಯ ಶಾಸಕರುಗಳು, ಗಣ್ಯರು ಹಾಗೂ ಜಿಲ್ಲಾಮುಖಂಡರೊಂದಿಗೆ ಸಭೆಯನ್ನು ನಡೆಸಿ, ಈ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ:ಎಂಇಡಿ 639 ಎಂಎಂಸಿ 2025

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.